Akashvani : Bangalore
Regional Bulletin In Kannada
16.09.2024 / 14.30 hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಶೀಘ್ರವೇ ಸ್ಥಳೀಯ ಸಂಸ್ಥೆಗಳ ಚುನಾವಣೆ ನಡೆಸುವಂತೆ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಆಗ್ರಹ
- ಪುಣೆಯಿಂದ ಹುಬ್ಬಳಿಗೆ ಇಂದಿನಿಂದ ವಂದೇ ಭಾರತ್ ರೈಲು ಸಂಚಾರ - ಸುಗಮ ಸುರಕ್ಷಿತ ರೈಲು ಸೇವೆಗೆ ಆದ್ಯತೆ - ಸಚಿವ ವಿ.ಸೋಮಣ್ಣ
- ದಶಕಗಳ ಬಳಿಕ ಕಲಬುರಗಿಯಲ್ಲಿ ನಾಳೆ ಸಚಿವ ಸಂಪುಟ ಸಭೆ; ಕಲ್ಯಾಣ ಕರ್ನಾಟಕದಲ್ಲಿ ಅಭಿವೃದ್ಧಿಯ ನಿರೀಕ್ಷೆ
- ನಾಗಮಂಗಲ ಘಟನೆಯಲ್ಲಿ ನಿಷೇಧಿತ ಸಂಘಟನೆಗಳು ಭಾಗಿ ಶಂಕೆ- ಎನ್ಐಎ ತನಿಖೆಗೆ ಆರ್.ಅಶೋಕ ಆಗ್ರಹ
- ರಾಜ್ಯದೆಲ್ಲೆಡೆ ಈದ್ ಮಿಲಾದ್ ಹಬ್ಬದ ಸಂಭ್ರಮ; ಮುಸ್ಲೀಂ ಬಾಂಧವರಿಂದ ಸಾಮೂಹಿಕ ಪ್ರಾರ್ಥನೆ

<><*<><>*><>

ಪ್ರಜಾಪ್ರಭುತ್ವ ದಿನದಂದು ಮಾನವ ಸರಪಳಿ ನೆಪದಲ್ಲಿ ಪ್ರಚಾರ ಗಿಟ್ಟಿಸಿದ ರಾಜ್ಯಸರ್ಕಾರಕ್ಕೆ ಪ್ರಜಾಪ್ರಭುತ್ವ ಉಳಿಸುವ ಕಾಳಜಿಯೇ ಇಲ್ಲ ಎಂದು ಕೇಂದ್ರ ಕೈಗಾರಿಕಾ ಸಚಿವ ಎಚ್.ಡಿ.ಕುಮಾರಸ್ವಾಮಿ ಟೀಕಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಎಚ್.ಡಿ.ಕುಮಾರಸ್ವಾಮಿ, ಶೀಘ್ರವೇ ಸ್ಥಳೀಯ ಸಂಸ್ಥೆಗಳ ಚುನಾವಣೆ ನಡೆಸುವಂತೆ ಆಗ್ರಹಿಸಿದ್ದಾರೆ. ತಳಮಟ್ಟದ ಆಧಾರಸ್ತಂಭಗಳಾದ ಜಿಲ್ಲಾ, ತಾಲೂಕು, ಪಂಚಾಯಿತಿ ಹಾಗೂ ಬಿಬಿಎಂಪಿ ಚುನಾವಣೆ ಏಕೆ ನಡೆಸುತ್ತಿಲ್ಲ ಎಂದು ಪ್ರಶ್ನಿಸಿದ್ದಾರೆ. ಮೊದಲು ಸ್ಥಳೀಯ ಸಂಸ್ಥೆ ಚುನಾವಣೆ ಘೋಷಿಸಿ, ನೈಜ ಪ್ರಜಾಪ್ರಭುತ್ವದ ಸರಪಳಿಯನ್ನು ಗಟ್ಟಿಗೊಳಿಸಿ ಎಂದು ಆಗ್ರಹಿಸಿದ್ದಾರೆ.

<><*<><>*><>

ಪ್ರಧಾನಿ ನರೇಂದ್ರ ಮೋದಿಯವರ ದೂರದೃಷ್ಟಿ ಯೋಜನೆಗಳ ಹಿನ್ನಲೆಯಲ್ಲಿ ರೈಲ್ವೆ ಇಲಾಖೆಯು ಅಭಿವೃದ್ಧಿ ಸಾಧಿಸುತ್ತಿದೆ ಎಂದು ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ತಿಳಿಸಿದ್ದಾರೆ. ಬೆಳಗಾವಿಯ ಸಾಂಬ್ರಾ ವಿಮಾನ ನಿಲ್ದಾಣದಲ್ಲಿ ಸುದ್ಧಿಗಾರರೊಂದಿಗೆ ಮಾತನಾಡಿದ ಅವರು, ಜನ ಸಾಮಾನ್ಯರಿಗೆ ಹೆಚ್ಚು ಅನುಕೂಲ ಒದಗಿಸುವ ನಿಟ್ಟಿನಲ್ಲಿ ಸುಗಮ ಸುರಕ್ಷಿತ ರೈಲು ಸೇವೆ ನೀಡಲಾಗುತ್ತಿದ್ದು, ಹಿಂದಿಗಿಂತ ಈಗ ರೈಲು ಸೇವೆ ನೂರುಪಟ್ಟು ಅಭಿವೃದ್ಧಿ ಸಾಧಿಸಿದೆ ಎಂದು

ಹೇಳಿದ್ದಾರೆ. ಪುಣೆಯಿಂದ ಹುಬ್ಬಳ್ಳಿಗೆ ವಂದೇ ಭಾರತ್ ರೈಲು ಸಂಚಾರ ಆರಂಭಗೊಳ್ಳಲಿದ್ದು, ಈ ರೈಲಿಗೆ ಇಂದು ರಾತ್ರಿ ೮ ಗಂಟೆಗೆ ಬೆಳಗಾವಿಯಲ್ಲಿ ಹಸಿರು ನಿಶಾನೆ ತೋರಲಾಗುವುದು ಎಂದು ಮಾಹಿತಿ ನೀಡಿದ್ದಾರೆ. ಇದೇ ವೇಳೆ ಬೆಂಗಳೂರು-ಧಾರವಾಡ ವಂದೇ ಭಾರತ್ ರೈಲು ಬೆಳಗಾವಿವರೆಗೂ ವಿಸ್ತರಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದ್ದಾರೆ. ಕಿತ್ತೂರು ಮಾರ್ಗದ ಬೆಳಗಾವಿ ಧಾರವಾಡ ನೇರ ರೈಲು ಸಂಚಾರ ಆರಂಭಿಸುವ ಬಗ್ಗೆ ಜಿಲ್ಲಾಧಿಕಾರಿ ಮತ್ತು ಸ್ಥಳೀಯ ಜನಪ್ರತಿನಿಧಿಗಳೊಂದಿಗೆ ಚರ್ಚಿಸಲಾಗಿದೆ. ಈಯೋಜನೆಯ ಕಾಮಗಾರಿಯನ್ನು ಶೀಘ್ರವೇ ಆರಂಭಿಸಲಾಗುವುದು ಎಂದು ಹೇಳಿದ್ದಾರೆ. ಸವದತ್ತಿ ಯಲ್ಲಮ್ಮ ದರ್ಶನಕ್ಕೆ ತೆರಳುವ ಭಕ್ತರಿಗೆ ಅನುಕೂಲವಾಗುವ ಹಿನ್ನಲೆಯಲ್ಲಿ ರೈಲು ಸಂಪರ್ಕ ಕಲ್ಪಿಸುವ ಬಗ್ಗೆ ಚರ್ಚೆ ನಡೆಸಲಾಗಿದ್ದು, ಈ ಯೋಜನೆಯ ಅನುಷ್ಠಾನಕ್ಕೆ ಸರ್ವೆ ಕಾರ್ಯ ನಡೆದಿದೆ ಎಂದು ಸಚಿವರು ತಿಳಿಸಿದ್ದಾರೆ.

<><*<><>*><>

ದಶಕಗಳ ಬಳಿಕ ನಾಳೆ ಕಲಬುರಗಿಯ ಮಿನಿ ವಿಧಾನಸೌಧದಲ್ಲಿ ಎರಡನೇ ಬಾರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ವಿಶೇಷ ಸಂಪುಟ ಸಭೆ ನಡೆಯಲಿದೆ. ಆಡಳಿತ ಪಕ್ಷದ ಶಾಸಕರು ಕ್ಷೇತ್ರದ ಅಭಿವೃದ್ಧಿ ಪಟ್ಟಿಯನ್ನು ಸಿದ್ದಪಡಿಸಿ ಈಗಾಗಲೇ ಸರ್ಕಾರಕ್ಕೆ ನೀಡಿದ್ದಾರೆ. ಕಳೆದ ಒಂದು ದಶಕದ ಹಿಂದೆ ಕಲಬುರಗಿಯಲ್ಲಿ ಸಚಿವ ಸಂಪುಟ ಸಭೆ ನಡೆದಿತ್ತು. ನಾಳೆ ನಡೆಯಲಿರುವ ಸಚಿವ ಸಂಪುಟ ಸಭೆಯ ಹಿನ್ನೆಲೆಯಲ್ಲಿ ಸಿದ್ಧತೆಗಳು ನಡೆಯುತ್ತಿವೆ.  ಕಲಬುರಗಿಯಲ್ಲಿ ಮೊದಲ ಬಾರಿಗೆ ೧೯೮೨ರಲ್ಲಿ ಆರ್.ಗುಂಡೂರಾವ್ ಮುಖ್ಯಮಂತ್ರಿ ಆಗಿದ್ದ ವೇಳೆ ಸಚಿವ ಸಂಪುಟ ಸಭೆ ನಡೆದಿತ್ತು. ಆ ಬಳಿಕ ೨೦೦೮ರಲ್ಲಿ ಬಿ.ಎಸ್ ಯಡಿಯೂರಪ್ಪ ಮುಖ್ಯಮಂತ್ರಿ ಆಗಿದ್ದ ವೇಳೆ ಸಚಿವ ಸಂಪುಟ ಸಭೆ ನಡೆದಿತ್ತು. ೨೦೧೪ರಲ್ಲಿ ಸಿದ್ದರಾಮಯ್ಯ ಮುಖ್ಯಮಂತ್ರಿ ಆಗಿದ್ದ ವೇಳೆ ಕಲಬುರಗಿಯಲ್ಲಿ ವಿಶೇಷ ಸಚಿವ ಸಂಪುಟ ಸಭೆ ನಡೆದಿತ್ತು, ಇದೀಗ ೨೦೨೪ ರಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ಎರಡನೇ ಬಾರಿ ವಿಶೇಷ ಸಚಿವ ಸಂಪುಟ ಸಭೆ ನಡೆಯಲಿದೆ.

<><*<><>*><>

ಕಲ್ಯಾಣ ಕರ್ನಾಟಕ ಭಾಗದ ಜನರ ಬಹು ನಿರೀಕ್ಷೆಯಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ಕಲಬುರಗಿಯಲ್ಲಿ ನಾಳೆ ಸಚಿವ ಸಂಪುಟ ಸಭೆ ನಡೆಯುತ್ತಿದ್ದು, ಈ ಭಾಗದ ಇಲಾಖಾವಾರು ಸಮಗ್ರ ಅಭಿವೃದ್ಧಿಯ ಕುರಿತು ಚರ್ಚಿಸಲಾಗುವುದು ಎಂದು ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.  ಕಲಬುರಗಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಲ್ಯಾಣ ಕರ್ನಾಟಕ ಭಾಗದಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿಗೆ ಅಗತ್ಯ ಕ್ರಮ ವಹಿಸಲಾಗುವುದು ಎಂದು ತಿಳಿಸಿದ್ದಾರೆ. ಮುಂದಿನ ಎರಡು ವರ್ಷದಲ್ಲಿ ಕಲ್ಯಾಣ ಪಥ ಯೋಜನೆಯಡಿಯಲ್ಲಿ ರಸ್ತೆಗಳ ರಿಪೇರಿ ಹಾಗೂ ಉನ್ನತಿಕರಣ ಮಾಡಲಾಗುವುದು. ಈ ಭಾಗದ ಅಭಿವೃದ್ಧಿ ವಿಚಾರದಲ್ಲಿ ಅನ್ಯಾಯವಾಗಲು ಬಿಡುವುದಿಲ್ಲ ಎಂದು ಅವರು ಭರವಸೆ ನೀಡಿದ್ದಾರೆ. ಮುಂದಿನ ಒಂದು ವರ್ಷದ ಅವಧಿಯಲ್ಲಿ ೬ ಸಾವಿರದ ೫೦೦ ಶಿಕ್ಷಕರು ಸೇರಿದಂತೆ ೧೫ ಸಾವಿರ

ಖಾಲಿ ಹುದ್ದೆ ತುಂಬಲಾಗುವುದು ಎಂದು ವೈದ್ಯಕೀಯ ಶಿಕ್ಷಣ ಸಚಿವ ಶರಣಪ್ರಕಾಶ್ ಪಾಟೀಲ್ ಇದೇ ವೇಳೆ ಸ್ಪಷ್ಟಪಡಿಸಿದ್ದಾರೆ.

<><*<><>*><>

ಮಂಡ್ಯ ಜಿಲ್ಲೆಯ ನಾಗಮಂಗಲ ಪಟ್ಟಣದಲ್ಲಿ ಗಣೇಶ ವಿಸರ್ಜನೆ ಮೆರವಣಿಗೆ ವೇಳೆ ನಡೆದ ಹಿಂಸಾಚಾರ ಸಂದರ್ಭದಲ್ಲಿ ಪಾಕಿಸ್ತಾನ ಪರ ಘೋಷಣೆ ಕೂಗಲಾಗಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆರೋಪಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಘಟನೆ ಕುರಿತಂತೆ ಎನ್‌ಐಎ ತನಿಖೆ ನಡೆಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಗೃಹ ಸಚಿವ ಜಿ.ಪರಮೇಶ್ವರ್ ಅವರನ್ನು ಒತ್ತಾಯಿಸುತ್ತೇನೆ ಎಂದು ಹೇಳಿದ್ದಾರೆ. ಈ ಘಟನೆಯಲ್ಲಿ ನಿಷೇಧಿತ ಸಂಘಟನೆಗಳು ಭಾಗಿಯಾಗಿರಬಹುದು ಎಂದು ಅನುಮಾನ ವ್ಯಕ್ತಪಡಿಸಿದ್ದಾರೆ.

<><*<><>*><>

ಜಾತಿ ನಿಂದನೆ ಪ್ರಕರಣದಲ್ಲಿ ಮಾಜಿ ಸಚಿವ ಮುನಿರತ್ನ ವಿರುದ್ಧ ಕಠಿಣ ಕ್ರಮಕೈಗೊಳ್ಳುವಂತೆ ಒಕ್ಕಲಿಗ ಸಮುದಾಯದ ಸಚಿವರು ಹಾಗೂ ಶಾಸಕರು ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿ ಸಲ್ಲಿಸಿದರು. ಸಿದ್ದರಾಮಯ್ಯ ಅವರನ್ನು ಬೆಂಗಳೂರಿನ ಕಾವೇರಿ ನಿವಾಸದಲ್ಲಿ ಭೇಟಿ ಮಾಡಿ ಮುನಿರತ್ನ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದರು. ಸಚಿವರಾದ ಚಲುವರಾಯಸ್ವಾಮಿ, ಡಾ.ಎಂ.ಸಿ.ಸುಧಾಕರ್, ಶಾಸಕರಾದ ಡಾ.ಎಚ್.ಡಿ.ರಂಗನಾಥ್, ಎಚ್.ಸಿ.ಬಾಲಕೃಷ್ಣ, ನಂಜೇಗೌಡ, ಶರತ್ ಬಚ್ಚೇಗೌಡ, ಪರಿಷತ್ ಸದಸ್ಯರಾದ ರವಿ, ಪುಟ್ಟಣ್ಣಯ್ಯ ಸೇರಿದಂತೆ ಹಲವು ನಾಯಕರು ನಿಯೋಗದಲ್ಲಿ ಇದ್ದರು.

<><*<><>*><>

ನಾಳೆ ಪ್ರಧಾನಮಂತ್ರಿ ನರೇಂದ್ರ ಮೋದಿ ನೇತೃತ್ವದ ೩ ಪಾಯಿಂಟ್ ೦ ಸರ್ಕಾರಕ್ಕೆ ನೂರು ದಿನದ ಸಂಭ್ರಮ. ವಿಕಸಿತ ಭಾರತ ಯೋಜನೆಯಡಿ ಪ್ರಧಾನಿ ಮೋದಿ ಅವರು, ಹಲವು ಯೋಜೆನೆಗಳನ್ನು ಜಾರಿಗೊಳಿಸಿದ್ದಾರೆ. ನೂರು ದಿನಗಳಲ್ಲಿ ರೈತರ ಅಭಿವೃದ್ಧಿ, ಮಹಿಳೆಯರ ಅಭಿವೃದ್ಧಿ, ಯುವಶಕ್ತಿ, ಸಾಮಾಜಿಕ ಕಲ್ಯಾಣ, ಆರೋಗ್ಯ ಮತ್ತು ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಲಾಗಿದೆ. ಅಭಿವೃದ್ಧಿ ಹೊಂದಿತ್ತಿರುವ ಮತ್ತು ಸುಸ್ಥಿರ ಆರ್ಥಿಕತೆ, ನಾಗರಿಕರ ಹೆಚ್ಚಿನ ಸಬಲೀಕರಣಕ್ಕೆ ಆದ್ಯತೆ ನೀಡಲಾಗಿದೆ. ೪.೧ ಕೋಟಿ ಯುವಕರಿಗೆ ಕೌಶಲ್ಯ ತರಬೇತಿಯನ್ನು ನೀಡಲಾಗಿದೆ. ೭೦ವರ್ಷಕ್ಕಿಂತ ಮೇಲ್ಪಟ್ಟವರಿಗೆ ಆಯುಷ್ಮಾನ್ ಭಾರತ್ ಯೋಜನೆಯನ್ನು ವಿಸ್ತರಿಸಲಾಗಿದೆ. ೬೨ ಸಾವಿರದ ೫೦೦ ಕಿಲೋಮೀಟರ್ ರಸ್ತೆ ವಿಸ್ತರಿಸಿ, ೨೫ ಸಾವಿರ ಹಳ್ಳಿಗಳಿಗೆ ಸಂಪರ್ಕ ಕಲ್ಪಿಸಲಾಗಿದೆ. ಬೆಂಗಳೂರು-ಪುಣೆ ಸೇರಿದಂತೆ ಹಲವು ಮೆಟ್ರೊ ಯೋಜನೆಗಳಿಗೆ ಚಾಲನೆ ನೀಡಲಾಗಿದೆ.

<><*<><>*><>

ಈದ್ ಮಿಲಾದ್ ಹಬ್ಬದ ಸಂದರ್ಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್, ಪ್ರಧಾನಿ ನರೇಂದ್ರ ಮೋದಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಹಲವು ಗಣ್ಯರು ಮುಸ್ಲಿಂ ಬಾಂಧವರಿಗೆ ಶುಭಾಶಯ ಕೋರಿದ್ದಾರೆ. ಮುಸ್ಲಿಮರ ಪವಿತ್ರ ಈದ್ ಮಿಲಾದ್ ಅನ್ನು ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಶ್ರದ್ಧಾ ಭಕ್ತಿ, ಸಡಗರಗಳಿಂದ ಆಚರಿಸಲಾಗುತ್ತಿದೆ. ಪ್ರವಾದಿ ಮಹಮದ್ ಪೈಗಂಬರ್ ಜನ್ಮ ದಿನಾಚರಣೆಯ ಅಂಗವಾಗಿ ವಿವಿಧ ಮಸೀದಿಗಳಲ್ಲಿ ಮೌಲೀದ್ ಪಾರಾಯಣ ನಡೆಯಿತು. ಮುಸ್ಲಿಂ ಬಾಂಧವರು ಪರಸ್ಪರ ಶುಭಾಶಯಗಳನ್ನು ಕೋರುವ ಮೂಲಕ ಸಂಭ್ರಮಿಸಿದರು. ಚಿತ್ರದುರ್ಗ ಜಿಲ್ಲೆಯಲ್ಲಿ ಸಂಭ್ರಮದಿಂದ ಈದ್ ಮಿಲಾದ್ ಹಬ್ಬವನ್ನು ಆಚರಿಸಿದರು. ಸಮುದಾಯದ ಒಂದು ಪಂಗಡದವರು ತಾವು ಸಾಕಿರುವ ಬಸವಗಳನ್ನು ಸಿಂಗರಿಸಿ ಮೆರವಣಿಗೆ ನಡೆಸಿದರು. ಕೋಲಾರ ಜಿಲ್ಲೆಯಾದ್ಯಂತ ಪ್ರೀತಿ, ಸಹೋದರತ್ವ ಭಾವನೆಯನ್ನು ಬೆಸೆಯುವ ಪ್ರವಾದಿ ಮೊಹಮ್ಮದ್ ಅವರ ಜನ್ಮ ದಿನದ ಅಂಗವಾಗಿ ಈದ್ ಮಿಲಾದ್ ಹಬ್ಬ ಶಾಂತಿಯುತವಾಗಿ ನಡೆಯಿತು. ಕೋಲಾರ ನಗರದ ಕ್ಲಾಕ್ ಟವರ್ ನಿಂದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಸಂಚರಿಸಿ ಕೋಲಾರ - ಬೆಂಗಳೂರು ರಸ್ತೆಯಲ್ಲಿರುವ ಈದ್ಗಾ ಮೈದಾನ ಮತ್ತು ಸಂಗೊಂಡಹಳ್ಳಿ ಈದ್ಗಾ ಮೈದಾನದಲ್ಲಿ ಸಾಮೂಹಿಕವಾಗಿ ಪ್ರಾರ್ಥನೆ ನಡೆಯಿತು.

<><*<><>*><>

ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ವತಿಯಿಂದ ವಿಶ್ವೇಶ್ವರಯ್ಯ ಸಂಶೋಧನೆ ಮತ್ತು ನಾವಿನ್ಯತೆ ಕೋಶ ಹಾಗೂ ಟೆಲಿಕಾಮ್ ಸೆಂಟರ್ಸ್ ಆಫ್ ಎಕ್ಸ್‌ಲೆನ್ಸ್ ನಡುವೆ ತಿಳುವಳಿಕೆ ಒಪ್ಪಂದ ಪತ್ರಕ್ಕೆ ಸಹಿ ಹಾಕಲಾಗಿದೆ. ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಕುಲಪತಿ ಡಾ.ಎಸ್.ವಿದ್ಯಾಶಂಕರ್, ಕುಲಸಚಿವರಾದ ಡಾ.ಬಿ.ಇ.ರಂಗಸ್ವಾಮಿ,, ಎಸ್‌ಆರ್‌ಐನ ಡಿಡಿಜಿ ವಿನೋದ್‌ಕುಮಾರ್, ಟಿಸಿಒಇ ನಿರ್ದೇಶಕರಾದ ಡಾ.ಅನುರಾಗ್ ವಿಭೂತಿ ಒಡಂಬಡಿಕೆಗೆ ಸಹಿ ಹಾಕಿದರು. ಭಾರತದ ನಾಯಕತ್ವವನ್ನು ಗಮನಾರ್ಹವಾಗಿ ಮುನ್ನಡೆಸುವ ಪಾಲುದಾರಿಕೆ ಹಾಗೂ ೫ ಜಿ, ೬ ಜಿ, ಕ್ವಾಂಟಮ್ ಕಂಪ್ಯೂಟಿಂಗ್, ಕೃತಕ ಬುದ್ಧಮತ್ತೆ ಮತ್ತು ಶೈಕ್ಷಣಿಕ-ಉದ್ಯಮ ಇಂಟರ್ಫೇಸ್ ವೇದಿಕೆಯನ್ನು ಒದಗಿಸುವುದು ಒಡಂಬಡಿಕೆಯ ಮುಖ್ಯ ಉದ್ದೇಶವಾಗಿರುತ್ತದೆ ಎಂದು ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ಪ್ರಕಟಣೆಯಲ್ಲಿ ತಿಳಿಸಿದೆ.

<><*<><>*><>

ಸ್ವಚ್ಛತೆಯ ಬಗ್ಗೆ ಜನ ಜಾಗೃತಿ ಮೂಡಿಸುವ ಹಾಗೂ ಕಾರ್ಯ ಪ್ರವೃತ್ತತೆ ಸಾದರಪಡಿಸುವ ಉದ್ದೇಶದ 'ಸ್ವಚ್ಛಾತಾ ಹೀ ಸೇವಾ' ಆಂದೋಲನವನ್ನು ದೇಶಾದ್ಯಂತ ಎಲ್ಲ ಕೇಂದ್ರ ಸರ್ಕಾರಿ ಕಚೇರಿ ಹಾಗೂ ಸಾರ್ವಜನಿಕ ಉದ್ದಿಮೆಗಳಲ್ಲಿ ನಾಳೆಯಿಂದ ಹಮ್ಮಿಕೊಳ್ಳಲಾಗಿದೆ. ಆಕಾಶವಾಣಿ ಕೂಡ ವಿವಿಧ ಸ್ವಚ್ಛತಾ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದು, ಏಕ್ ಪೇಡ್ ಮಾ ಕೆ ನಾಮ್ ಅಂಗವಾಗಿ ಸಸಿ ಹಾಕುವ ಕಾರ್ಯಕ್ರಮ ಕಚೇರಿಯ ಎಲ್ಲ ಸ್ಟೂಡಿಯೋ ಆವರಣಗಳ ವಸತಿ ಸಮುಚ್ಛಯ ಆವರಣದಲ್ಲಿ ನಡೆಯಲಿದೆ. ಸ್ವಚ್ಛತಾ ಚಟುವಟಿಕೆಗಳಲ್ಲಿ ಗಣನೀಯ ಕೊಡುಗೆ ನೀಡಿದ

ಸಿಬ್ಬಂದಿಗೆ ಸಫಾಯಿ ಮಿತ್ರ, ಗೌರವ ಆರೋಗ್ಯ ತಪಾಸಣೆ ಮೊದಲಾದ ಕಾರ್ಯಕ್ರಮಗಳನ್ನು ಅಕ್ಟೋಬರ್ ೨ರವರೆಗೆ ಹಮ್ಮಿಕೊಳ್ಳಲಾಗಿದೆ.

<><*<><>*><>

ಕಲ್ಯಾಣ ಕರ್ನಾಟಕ ಉತ್ಸವದ ಅಂಗವಾಗಿ ನಾಳೆ ಜಿಲ್ಲಾಡಳಿತದ ವಯಿಯಿಂದ ರಾಷ್ಟ್ರ ಧ್ವಜಾರೋಹಣ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳ್ಳಿಸಬೇಕೆಂದು ರಾಯಚೂರು ಜಿಲ್ಲಾಧಿಕಾರಿ ನಿತೀಶ್ ಕೆ. ಮನವಿ ಮಾಡಿದ್ದಾರೆ. ಧ್ವಜಾರೋಹಣ ಕಾರ್ಯಕ್ರಮದಲ್ಲಿ ವೈದ್ಯಕೀಯ ಶಿಕ್ಷಣ ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವ ಡಾ.ಶರಣ ಪ್ರಕಾಶ್ ಪಾಟೀಲ್, ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ್ ಹಾಗೂ ಜಿಲ್ಲೆಯ ಶಾಸಕರು ಭಾಗವಹಿಸಲಿದ್ದಾರೆ. ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <><*<>